**DAY & DATE: MONDAY, MARCH 02nd, 2026**

**Matter: Graduation Day**

**As appeared in the Newspapers:**

**VIJAYA KARNATAKA**
(State, Page No. 12)

# ಬಿಎನ್‌ಎಂಐಟಿ ಘಟಿಕೋತ್ಸವ

**ಬೆಂಗಳೂರು:** ನವ ಭಾರತದ ಭವಿಷ್ಯ ಯುವ ಜನರ ಕೈಯ್ಯಲ್ಲಿದೆ. ಪರಿಶ್ರಮವೇ ಯಶಸ್ಸಿನ ಕೀಲಿಕೈ ಎಂದು ಲೈಟ್ ಕ್ಯಾಸ್ಟ್ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕಿ ಸರಸ್ವತಿ ರಾಮಚಂದ್ರ ಹೇಳಿದರು.

ಬಿಎನ್‌ಎಂಐಟಿ ಕಾಲೇಜಿನಲ್ಲಿ ಶನಿವಾರ ನಡೆದ ಘಟಿಕೋತ್ಸವದಲ್ಲಿ ಮಾತನಾಡಿದ ಅವರು, ‘‘ಪದವಿ ಪಡೆದ ವಿದ್ಯಾರ್ಥಿಗಳಿಗೆ ಇವತ್ತು ಸಂಭ್ರಮದ ದಿನವಾಗಿದೆ. ಆದರೆ ನಾಳೆಯಿಂದ ನಿಮ್ಮ ಜವಾಬ್ದಾರಿ ಆರಂಭವಾಗುತ್ತದೆ. ಸ್ಪರ್ಧಾತ್ಮಕ ಜಗತ್ತಿಗೆ ಪ್ರವೇಶ ಪಡೆಯುತ್ತೀರಿ. ಕಾಲೇಜಿನಿಂದ ಗಳಿಸಿದ್ದರ ಜತೆಗೆ ಹೊಸದನ್ನೂ ಕಲಿಯಬೇಕಾಗುತ್ತದೆ. ಕಲಿಕೆ ಎಂಬುದು ನಿರಂತರವಾದ ಪ್ರಕ್ರಿಯೆ, ಪ್ರತಿದಿನವೂ ಹೊಸದನ್ನು ಕಲಿಯುತ್ತಿರಬೇಕು,’’ ಎಂದು ಸಲಹೆ ನೀಡಿದರು.

‘‘ಜೀವನದಲ್ಲಿ ಒಳ್ಳೆಯ ಕೆಲಸಗಳನ್ನು ಮಾಡಿ. ಸಹಾಯ ಮಾಡಿ, ಸಮಾಜಕ್ಕೆ ನಿಮ್ಮ ಕೊಡುಗೆ ನೀಡಿ,’’ ಎಂದು ಬಿಎನ್‌ಎಂ ಸಮೂಹ ಶಿಕ್ಷಣ ಸಂಸ್ಥೆ ಅಧ್ಯಕ್ಷ ನಾರಾಯಣರಾವ್ ಆರ್. ಮಾನೆ ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಬಿಎನ್‌ಎಂಐಟಿ ಜಂಟಿ ಕಾರ್ಯದರ್ಶಿ ಅಶೋಕ್ ಆರ್. ಮಾನೆ , ಕಾಲೇಜಿನ ಹೆಚ್ಚುವರಿ ನಿರ್ದೇಶಕ ಡಾ. ಎಸ್.ವೈ. ಕುಲಕರ್ಣಿ, ನಿರ್ದೇಶಕ ಪ್ರೊ.ಟಿ.ಜೆ. ರಾಮಮೂರ್ತಿ, ಟ್ರಸ್ಟಿ ಈಶ್ವರ್ ಎನ್. ಮಾನೆ, ಕಾಲೇಜಿನ ಪ್ರಾಂಶುಪಾಲ ಡಾ.ಜಿ.ಎನ್.ಕೃಷ್ಣಮೂರ್ತಿ, ಡಾ.ಕೆ. ವೆಂಕಟೇಶ್, ಡಾ. ಜಿ.ಎನ್. ಕೇಶವಮೂರ್ತಿ ಹಾಜರಿದ್ದರು.

ಎಂಬಿಎ ವಿಭಾಗದಲ್ಲಿ 10 ವಿದ್ಯಾರ್ಥಿಗಳು ಮತ್ತು ಎಂಟೆಕ್ ವಿಭಾಗದಲ್ಲಿ ಇಬ್ಬರು ವಿದ್ಯಾರ್ಥಿಗಳು ಚಿನ್ನದ ಪದಕ ಪಡೆದುಕೊಂಡರು.

